RNU AIR DHARWAD

# ಜೂನ್ 26 2017
# ALL INDIA RADIO- DHARWAD
# PRADESH SAMACHARA (KANNADA) 7:05 AM

**ಆಕಾಶವಾಣಿ–ಪ್ರದೇಶ ಸಮಾಚಾರ**

**ಮುಖ್ಯಾಂಶಗಳು–**

- **ಸಾಮರಸ್ಯದ ಸಂಕೇತ ಪವಿತ್ರ ರಮ್‌ಜಾನ್ ಹಬ್ಬ : ಗಣ್ಯರಿಂದ ಶುಭ ಹಾರೈಕೆ.**

- **ವಿವಿಧತೆಯಲ್ಲಿ ವಿಶೇಷತೆ: ವಿವಿಧತೆಯೇ ಭಾರತದ ಶಕ್ತಿ : ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿಪಾದನೆ.**

- **ನಾಳೆ, ಬೆಂಗಳೂರು ನಗರ ನಿರ್ಮಾತೃ ನಾಡಪ್ರಭು ಕೆಂಪೆಗೌಡ ಅವರ ಜಯಂತಿ ಆಚರಣೆ.**

- **ಇಂದು ಅಂತರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನ. ಎಲ್ಲ ಪ್ರಜೆಗಳ ಆರೋಗ್ಯ ದೇಶದ ಸೌಭಾಗ್ಯ ಎಂಬ ಧ್ಯೇಯ ವಾಕ್ಯದೊಂದಿಗೆ ಆಚರಣೆ.**

<><><>

**ವಾರ್ತೆಗಳ ವಿವರ**

<><><>

**ದೇಶದ ಜನತೆಗೆ ಮತ್ತು ವಿದೇಶದಲ್ಲಿರುವ** ನಮ್ಮ ಭಾರತೀಯರಿಗೆ ವಿಶೇಷವಾಗಿ ಮುಸ್ಲಿಂ ಸಹೋದರ ಸಹೋದರಿಯರಿಗೆ ರಾಷ್ಟ್ರಪತಿ ಪ್ರಣಬ್ ಮುಖರ್ಜಿ ಈದ್–ಉಲ್–ಫಿತ್ರ್‌ನ ಶುಭಾಶಯ ತಿಳಿಸಿದ್ದಾರೆ.

ಸಂತೋಷದ ಈ ಸಂದರ್ಭದಲ್ಲಿ ಪವಿತ್ರ ತಿಂಗಳಲ್ಲಿ ಮಾಡಿದ ಉಪವಾಸ ಮತ್ತು ಪ್ರಾರ್ಥನೆ, ಸಂತೋಷ, ಶಾಂತಿ ಮತ್ತು ಸಮೃದ್ಧಿ ತರಲಿ ಹಾಗೂ ಮಾನವ ಕುಲಕ್ಕೆ ಸೇವೆ ಸಲ್ಲಿಸಲು ನಮ್ಮನ್ನು ನಾವು ಸಮರ್ಪಿಸಿಕೊಳ್ಳಲು ಇದೊಂದು ಉತ್ತಮ ಅವಕಾಶವಾಗಿದೆ ಎಂದು ರಾಷ್ಟ್ರಪತಿ ಪ್ರಣಬ್ ಮುಖರ್ಜಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

ಉಪರಾಷ್ಟ್ರಪತಿ ಹಮೀದ್ ಅನ್ಸಾರಿ ದೇಶದ ಜನತೆಗೆ ಈದ್–ಉಲ್–ಫಿತ್ರನ ಶುಭಾಶಯ ಸಲ್ಲಿಸಿದ್ದಾರೆ.

ಪವಿತ್ರ ರಮಜಾನ್ ತಿಂಗಳು ಸಾಂಪ್ರದಾಯಿಕ ಸಹೋದರತ್ವವನ್ನು ಬಿಂಬಿಸುತ್ತದೆ. ಜನರ ನಡುವೆ ಉತ್ತಮ ಹೊಂದಾಣಿಕೆಯನ್ನು ಈದ್–ಉಲ್–ಫಿತ್ರ ಸೂಚಿಸುತ್ತದೆ ಎಂದು ಉಪರಾಷ್ಟ್ರಪತಿ ಹಮೀದ್ ಅನ್ಸಾರಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

ರಾಜ್ಯಪಾಲ ವಜುಭಾಯಿ ವಾಲಾ, ಮುಖ್ಯಮಂತ್ರಿ ಸಿದ್ದರಾಮಯ್ಯ ನಾಡ ಜನತೆಗೆ ರಮಜಾನ್ ಹಬ್ಬದ ಶುಭಾಶಯ ತಿಳಿಸಿದ್ದಾರೆ.

<><><>

**ಇಂದು ಪವಿತ್ರ ರಮಜಾನ್ ಹಬ್ಬದ ಅಂಗವಾಗಿ** ಪ್ರಧಾನಮಂತ್ರಿ ನರೇಂದ್ರ ಮೋದಿ ಎಲ್ಲ ಮುಸ್ಲಿಂ ಬಾಂಧವರಿಗೆ ಶುಭ ಕೋರಿದ್ದಾರೆ.

ಆಕಾಶವಾಣಿಯ ತಮ್ಮ ಮನ್–ಕಿ–ಬಾತ್ ಕಾರ್ಯಕ್ರಮದಲ್ಲಿ ನಿನ್ನೆ ಮಾತನಾಡಿದ ಅವರು, ಭಾರತದ ವಿವಿಧತೆಯಲ್ಲಿ ವಿಶೇಷತೆಯೂ ಇದೆ ಹಾಗೂ ಭಾರತದ ವಿವಿಧತೆಯೇ ಭಾರತದ ಶಕ್ತಿಯೂ ಹೌದು. ರಂಜಾನ್ ಪವಿತ್ರ ತಿಂಗಳನ್ನು ಎಲ್ಲರೂ ಶ್ರದ್ಧಾಭಕ್ತಿಯಿಂದ, ಪವಿತ್ರ ಭಾವದಿಂದ ಆಚರಿಸುತ್ತಾರೆ. ಈದ್ ಉಲ್ ಫಿತ್ರ್ ಸಂದರ್ಭದಲ್ಲಿ ಎಲ್ಲರಿಗೂ ಹಾರ್ದಿಕ ಶುಭಾಶಯಗಳು ಎಂದು ಹೇಳಿದರು.

<><><>

**ಧ್ವನಿ–ನರೇಂದ್ರ ಮೋದಿ 50 ಸೆಕೆಂಡ್ಸ್**

<><><>

**ಪವಿತ್ರವಾದ ಈ ರಮಜಾನ್ ತಿಂಗಳಲ್ಲಿ** ಉತ್ತರ ಪ್ರದೇಶದ ಬಿಜನೌರ್‌ನ ಮುಬಾರಕ್‌ಪುರ್‌ದ ಗ್ರಾಮಸ್ಥರು ಒಟ್ಟಾಗಿ ಶೌಚಾಲಯ ನಿರ್ಮಿಸುವ ಹಾಗೂ ಬಯಲು ಶೌಚಮುಕ್ತವಾಗಿಸುವ ನಿರ್ಣಯ ಕೈಗೊಂಡಿದ್ದನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಮುಕ್ತ ಕಂಠದಿಂದ ಶ್ಲಾಘಿಸಿದ್ದಾರೆ.

ಶೌಚಾಲಯ ನಿರ್ಮಾಣಕ್ಕೆ ಸರ್ಕಾರದಿಂದ ಸಿಗುವ 17 ಲಕ್ಷ ರೂಪಾಯಿ ಅನುದಾನವನ್ನು ಹಿಂದಿರುಗಿಸಿ, ಶೌಚಾಲಯವನ್ನು ತಮ್ಮ ಪರಿಶ್ರಮ ಮತ್ತು ತಮ್ಮದೇ ಹಣದಿಂದ ನಿರ್ಮಿಸಿಕೊಳ್ಳುವುದಾಗಿ ತಿಳಿಸಿದ, ಮುಬಾರಕ್‌ಪುರ ಗ್ರಾಮದ ಜನತೆ, ಈ ರಮ್‌ಜಾನ್ ಪವಿತ್ರ ಸಂದರ್ಭವನ್ನು ಸಮಾಜದ ಏಳ್ಗೆಯ ಸಂದರ್ಭವನ್ನಾಗಿ ಪರಿವರ್ತಿಸಿದಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ ತಮ್ಮ ಮನದ ಮಾತು ಕಾರ್ಯಕ್ರಮದಲ್ಲಿ ಅಭಿನಂದನೆ ಸಲ್ಲಿಸಿದ್ದಾರೆ.

<><><>

**ಧ್ವನಿ–ನರೇಂದ್ರ ಮೋದಿ 30 ಸೆಕೆಂಡ್ಸ್**

<><><>

**ಶೌಚಾಲಯಗಳನ್ನು ನಿರ್ಮಿಸುವುದು ಸಮಾಜದ** ಜವಾಬ್ದಾರಿಯಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ಕೆ.ಆರ್.ರಮೇಶ್ ಕುಮಾರ್ ಹೇಳಿದ್ದಾರೆ.

ಕೋಲಾರದಲ್ಲಿ ನಿನ್ನೆ ಆಯೋಜಿಸಲಾಗಿದ್ದ, "ಶೌಚಾಲಯ ನಿರ್ಮಾಣಕ್ಕೆ ಸಮರ" ಎಂಬ ಅರಿವು ಮೂಡಿಸುವ ಕಾರ್ಯಕ್ರಮದ ಸಾಧಕ ಭಾದಕಗಳ ಕುರಿತು ಮಾತನಾಡಿದ ಅವರು, ಶೌಚಾಲಯ ನಿರ್ಮಾಣವನ್ನು ಜನತೆ ಸ್ವಯಂಪ್ರೇರಿತವಾಗಿ ಕಟ್ಟಿಕೊಳ್ಳಲು ಮುಂದಾಗಬೇಕು ಎಂದು ಹೇಳಿದರು.

ಗ್ರಾಮಗಳಲ್ಲಿ ಶೌಚಾಲಯಗಳನ್ನು ನಿರ್ಮಿಸಿಕೊಳ್ಳಲು ಎಲ್ಲರೂ ಸಹ ಅರಿವು ಮೂಡಿಸುವ ಕೆಲಸವನ್ನು ಮಾಡಬೇಕು ಎಂದು ಸಚಿವ ಕೆ.ಆರ್.ರಮೇಶಕುಮಾರ ಸಲಹೆ ನೀಡಿದರು.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ...**

<><><>

**ಸಚಿವ ಸಂಪುಟ ವಿಸ್ತರಣೆ ಸಂಬಂಧ** ಪಕ್ಷದ ವರಿಷ್ಠರೊಂದಿಗೆ ಸಮಾಲೋಚನೆ ನಡೆಸಿ, ನಾಡಿದ್ದು, ತಿರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೃಹ ಸಚಿವ ಸ್ಥಾನಕ್ಕೆ ಡಾಕ್ಟರ್ ಜಿ.ಪರಮೇಶ್ವರ ರಾಜೀನಾಮೆ ನೀಡಿದ ಹಿನ್ನೆಲೆ, ತೆರವಾಗಿರುವ ಸಚಿವ ಸ್ಥಾನಗಳ ಭರ್ತಿಗೆ ಚರ್ಚಿಸಲು ಇಂದು ಹೊಸದಿಲ್ಲಿಗೆ ತೆರಳುತ್ತಿರುವುದಾಗಿ ತಿಳಿಸಿದರು. ಶೀಘ್ರವೇ ಸಚಿವ ಸಂಪುಟ ವಿಸ್ತರಣೆ ಆಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

<><><>

**ಯುಪಿಎ ರಾಷ್ಟ್ರಪತಿ ಅಭ್ಯರ್ಥಿಯಾಗಿ** ಸ್ಪರ್ಧಿಸುತ್ತಿರುವ ಮಾಜಿ ಸ್ಪೀಕರ್ ಮೀರಾಕುಮಾರ್ ಅವರಿಗೆ ಬೆಂಬಲ ನೀಡಿ ಅವರ ನಾಮಪತ್ರಕ್ಕೆ ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಅವರು ಬೆಂಗಳೂರಿನಲ್ಲಿ ನಿನ್ನೆ ಸೂಚಕರಾಗಿ ಸಹಿ ಹಾಕಿದ್ದಾರೆ. ಈ ಸಂದರ್ಭದಲ್ಲಿ ಜೆ.ಡಿಎಸ್ ಶಾಸಕರು, ಎಐಸಿಸಿ ಮುಖಂಡರು ಉಪಸ್ಥಿತರಿದ್ದರು.

ಪ್ರತಿಪಕ್ಷಗಳ ಒಮ್ಮತದ ಅಭ್ಯರ್ಥಿಗೆ ಮೀರಾಕುಮಾರ ಆಯ್ಕೆಯಾಗಿದ್ದು, ನಾಮಪತ್ರ ಸಲ್ಲಿಸುವ ಪ್ರಕ್ರಿಯೆಗೆ ಕಾಂಗ್ರೆಸ್ ಚಾಲನೆ ನೀಡಿದ ಹಿನ್ನೆಲೆ, ನಾಮಪತ್ರಕ್ಕೆ ಸೂಚಕರು ಮತ್ತು ಅನುಮೋದಕರಿಂದ ಸಹಿ ಪಡೆಯುತ್ತಿದೆ.

ಅದರ ಭಾಗವಾಗಿ ಕೆಪಿಸಿಸಿ ಕಚೇರಿ ತಲುಪಿದ್ದ ನಾಮಪತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಕರಾಗಿ ಸಹಿ ಹಾಕಿದ್ದಾರೆ.

<><><>

**ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ** ನಾಳೆ ಬೆಂಗಳೂರು ನಗರ ನಿರ್ಮಾತೃ ನಾಡಪ್ರಭು ಕೆಂಪೆಗೌಡ ಅವರ ಜಯಂತಿ ಆಚರಿಸಲಾಗುವುದು ಎಂದು ಇಂಧನ ಖಾತೆ ಡಿ.ಕೆ.ಶಿವಕುಮಾರ ಹೇಳಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಳೆ ಬೆಳಗ್ಗೆ 9.30 ಕ್ಕೆ ಸ್ವಾತಂತ್ರ್ಯ ಉದ್ಯಾನವನದಿಂದ ವಿಧಾನಸೌಧಕ್ಕೆ ನಾಡ ಪ್ರಭು ಕೆಂಪೇಗೌಡರ ಸ್ತಬ್ಧಚಿತ್ರದೊಂದಿಗೆ ಜಾನಪದ ಕಲಾತಂಡಗಳ ಮೆರವಣಿಗೆ ನಡೆಯಲಿದೆ. ನಂತರ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕಾರ್ಯಕ್ರಮ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಲಿದ್ದಾರೆ ಎಂದು ಸಚಿವ ಡಿ.ಕೆ.ಶಿವಕುಮಾರ ತಿಳಿಸಿದರು.

<><><>

**ಇಂದು ಅಂತರಾಷ್ಟ್ರೀಯ ಮಾದಕ ವಸ್ತು ವಿರೋಧಿ** ದಿನ. ಮಾದಕ ವಸ್ತು ಪ್ರಾಣಕ್ಕೆ ಮಾರಕ–ಆರೋಗ್ಯದ ಬದುಕು ಸಾರ್ಥಕ ಎಂಬ ಉದ್ದೇಶ ಹಾಗೂ ಎಲ್ಲ ಪ್ರಜೆಗಳ ಆರೋಗ್ಯ ದೇಶದ ಸೌಭಾಗ್ಯ ಎಂಬ ಧ್ಯೇಯ ವಾಕ್ಯದೊಂದಿಗೆ ಈ ವರ್ಷ ಅಂತರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನವನ್ನು ಆಚರಿಸಲಾಗುತ್ತಿದೆ.

ಜನರಿಗೆ ಮಾಧಕ ವಸ್ತುಗಳ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಬೆಂಗಳೂರಿನಲ್ಲಿಂದು ಬೆಳಗ್ಗೆ 9 ಗಂಟೆಗೆ ಮೌರ್ಯ ಹೋಟೆಲ್ ವೃತ್ತದ ಗಾಂಧಿ ಪ್ರತಿಮೆಯಿಂದ ಕುಮಾರಪಾರ್ಕ್ ಗಾಂಧಿ ಭವನದವರೆಗೆ ಮಾದಕ ವಸ್ತು ವಿರೋಧಿ ಜಾಗೃತಿ ಸಪ್ತಾಹ ಜಾಥಾ ಆಯೋಜಿಸಲಾಗಿದ್ದು, ಚಲನಚಿತ್ರ ನಟ ಚೇತನ ಜಾಥಾಕ್ಕೆ ಚಾಲನೆ ನೀಡಲಿದ್ದಾರೆ.

<><><>

**ತಾವು ವಿಧಾನಸಭಾ ಚುನಾವಣೆಗೆ ಸಿದ್ಧರಿದ್ದು,** ಕೋಲಾರ ಕ್ಷೇತ್ರಕ್ಕೆ ಎಲ್ಲರೂ ಒಪ್ಪುವಂತಹ ಅಭ್ಯರ್ಥಿಯನ್ನು ಆಯ್ಕೆ ಮಾಡಲಾಗುವುದು ಎಂದು ಜೆಡಿಎಸ್ ವರಿಷ್ಠ ಹೆಚ್.ಡಿ.ದೇವೇಗೌಡ ಹೇಳಿದ್ದಾರೆ.

ಕೋಲಾರದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಣ್ಣ ರಾಜಕೀಯ ಪಕ್ಷವು ಎರಡು ರಾಷ್ಟ್ರೀಯ ಪಕ್ಷಗಳೊಂದಿಗೆ ಹೋರಾಟ ನಡೆಸುವುದು ಸುಲಭವಲ್ಲ. ಪ್ರಾದೇಶಿಕ ಪಕ್ಷ ಉಳಿಸಬೇಕು ಎನ್ನುವುದು ಜನರ ಮನಸ್ಸಿನಲ್ಲಿದ್ದು, ಅದನ್ನು ಅಳಿಸಿ ಹಾಕಲು ಯಾರಿಂದಲೂ ಸಾಧ್ಯವಿಲ್ಲ ಎಂದರು.

ರೈಲ್ವೇ, ರಾಷ್ಟ್ರೀಯ ಹೆದ್ದಾರಿ ಯೋಜನೆಗಳಲ್ಲಿ ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡಿದರೆ ಕರ್ನಾಟಕ ಹಿಂದೆ ಇದ್ದು, ರಾಜ್ಯವನ್ನು ಕೇಂದ್ರ ಸರ್ಕಾರ ಉದಾಸೀನ ಮಾಡಿದೆ ಎಂದು ಎಚ್.ಡಿ.ದೇವೇಗೌಡ ಟೀಕಿಸಿದರು.

<><><>

**ತುಂಗಭದ್ರಾ ಜಲಾಶಯದಲ್ಲಿ ತುಂಬಿರುವ ಹೂಳನ್ನು** ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗಖಾತ್ರಿ ಯೋಜನೆಯಡಿ ತೆಗೆಸಲು ಚಿಂತನೆ ನಡೆಸಲಾಗಿದೆ ಎಂದು ಉನ್ನತ ಶಿಕ್ಷಣ ಖಾತೆ ಸಚಿವ ಬಸವರಾಜ ರಾಯರಡ್ಡಿ ಹೇಳಿದ್ದಾರೆ.

ಕೊಪ್ಪಳ ತಾಲೂಕು ಹಿರೇಕಾಸನಕಂಡಿ ಗ್ರಾಮದ ಬಳಿ ತುಂಗಭದ್ರಾ ಜಲಾಶಯದ ಹಿನ್ನೀರಿನ ಪ್ರದೇಶದಲ್ಲಿ ರೈತರು ಸ್ವಯಂ ಪ್ರೇರಿತರಾಗಿ ಹೂಳು ತೆಗೆಯುತ್ತಿರುವ ಪ್ರದೇಶಕ್ಕೆ ನಿನ್ನೆ ಭೇಟಿ ನೀಡಿ, ನಂತರ ರೈತರೊಂದಿಗೆ ಮಾತನಾಡಿದ ಅವರು, ತುಂಗಭದ್ರಾ ಜಲಾಶಯದಲ್ಲಿ ಸುಮಾರು 30 ಟಿಎಂಸಿ ಯಷ್ಟು ಹೂಳು ತುಂಬಿರುವುದಾಗಿ ತಜ್ಞರು ವರದಿ ನೀಡಿದ್ದು, ಹೂಳು ತೆಗೆಯುವುದು ಅಸಾಧ್ಯ ಎಂದು ವೈಜ್ಞಾನಿಕ ವರದಿಯಲ್ಲಿ ತಿಳಿಸಲಾಗಿದೆ. ಇದಕ್ಕೆ ಪರ್ಯಾಯವಾಗಿ ಸಮಾನಾಂತರ ಜಲಾಶಯ ನಿರ್ಮಿಸುವ ಕುರಿತಂತೆ ಸರ್ಕಾರ ಈಗಾಗಲೆ ಅಗತ್ಯ ಕ್ರಮ ಕೈಗೊಂಡಿದೆ ಎಂದು ಸಚಿವ ಬಸವರಾಜ ರಾಯರೆಡ್ಡಿ ತಿಳಿಸಿದರು.

<><><>

**ತಮ್ಮ ಸರಕಾರ ಅಧಿಕಾರ ವಹಿಸಿಕೊಂಡ** ಬಳಿಕ ಬೋಗಸ್ ಕಾರ್ಡ್‌ಗಳನ್ನು ತಡೆಹಿಡಿಯಲಾಗಿದೆ. ಹಿಂದಿನ ಸರ್ಕಾರದ ಅವಧಿಯಲ್ಲಿ ಇಲಾಖೆಯಲ್ಲಿದ್ದ ಅಶಿಸ್ತು ಹಾಗೂ ಅವ್ಯವಹಾರವನ್ನು ಮಟ್ಟ ಹಾಕಲಾಗಿದೆ. ಹಾಗಿದ್ದರೂ ಸುಳ್ಳು ಆಪಾದನೆ ಮಾಡುವ ಬದಲು, ಇಲಾಖೆಯನ್ನು ಜನಪರವಾಗಿ ಅಭಿವೃದ್ಧಿಪಡಿಸುವಲ್ಲಿ ಯಾವುದಾದರೂ ಸಲಹೆ ಸೂಚನೆಗಳ್ನು ನೀಡಿದಲ್ಲಿ ಅದನ್ನು ಸ್ವೀಕರಿಸಲಾಗುವುದು ಎಂದು ಸಚಿವ ಯು.ಟಿ.ಖಾದರ್ ಹೇಳಿದ್ದಾರೆ.

ಮಂಗಳೂರಿನಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಸಂಸದೆ ಶೋಬಾ ಕರಂದ್ಲಾಜೆ ಅವರ ಪಡಿತರ ಚೀಟಿ ಮಾಫಿಯಾ ಎಂಬ ಹೇಳಿಕೆಗೆ ಸಂಬಂಧಿಸಿದಂತೆ ಈ ಪ್ರತಿಕ್ರಿಯೆ ನೀಡಿದರು.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

<><><>

- **ಸಾಮರಸ್ಯದ ಸಂಕೇತ ಪವಿತ್ರ ರಮ್‌ಜಾನ್ ಹಬ್ಬ : ಗಣ್ಯರಿಂದ ಶುಭ ಹಾರೈಕೆ.**
- **ವಿವಿಧತೆಯಲ್ಲಿ ವಿಶೇಷತೆ: ವಿವಿಧತೆಯೇ ಭಾರತದ ಶಕ್ತಿ : ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿಪಾದನೆ.**
- **ನಾಳೆ, ಬೆಂಗಳೂರು ನಗರ ನಿರ್ಮಾತೃ ನಾಡಪ್ರಭು ಕೆಂಪೇಗೌಡ ಅವರ ಜಯಂತಿ ಆಚರಣೆ.**
- **ಇಂದು ಅಂತರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನ. ಎಲ್ಲ ಪ್ರಜೆಗಳ ಆರೋಗ್ಯ ದೇಶದ ಸೌಭಾಗ್ಯ ಎಂಬ ಧ್ಯೇಯ ವಾಕ್ಯದೊಂದಿಗೆ ಆಚರಣೆ.**

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**